ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ 5 ಕ್ಕಿಂತ ಕಡಿಮೆ ಇರುವ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 10 ಕ್ಕಿಂತ ಕಡಿಮೆ ಇರುವ ಶಾಲೆಗಳನ್ನು ಮಾತ್ರ ಹತ್ತಿರದ ಶಾಲೆಗಳಿಗೆ ವಿಲಿನಗೊಳಿಸ ಲಾಗಿದೆಯೇ ಹೊರತು ಮುಚ್ಚಲಾಗಿಲ್ಲ.

ಆ) 2011–12ನೇ ಸಾಲಿನಲ್ಲಿ 39,841 ಮಕ್ಕಳು ಶಾಲೆಯಿಂದ ಹೊರಗುಳಿದ ಮಕ್ಕಳೆಂದು ಗುರುತಿಸಲಾಗಿದ್ದು, 2012–13ನೇ ಸಾಲಿನಲ್ಲಿ 68,301 ಮಕ್ಕಳನ್ನು ಗುರುತಿಸಲಾಗಿದ್ದು ಅದರಲ್ಲಿ 47,886 ಮಕ್ಕಳು ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಹಗೂ ಹಿಂದಿನ ಸಾಲಿನಿಂದ ಮುಂದುವರೆದ ಮಕ್ಕಳು 20,415 (ಈ ಮಕ್ಕಳು ಮುಖ್ಯ ವಾಹಿನಿಗೆ ಬಂದಿದ್ದು ಪುನಃ ಶಾಲೆ ತೊರೆಯುವುದನ್ನು ನಿಯಂತ್ರಿಸಲು ಈ ಮಕ್ಕಳನ್ನು ಪ್ರಸಕ್ತ ಸಾಲಿನಲ್ಲಿ ವಿವಿಧ ಕಾರ್ಯ ತಂತ್ರದ ಮೂಲಕ ಗುರುತಿಸಲಾಗಿದೆ.

ಇ) ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ 5 ಕ್ಕಿಂತ ಕಡಿಮೆ ಇರುವ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 10 ಕ್ಕಿಂತ ಕಡಿಮೆ ಇರುವ ಶಾಲೆಗಳನ್ನು ಮಾತ್ರ ಹತ್ತಿರದ ಶಾಲೆಗಳಿಗೆ ವಿಲೀನಗೊಳಿಸ ಲಾಗಿದೆಯೇ ಹೊರತು ಮುಚ್ಚಲಾಗಿಲ್ಲ.

ಈ) ಮತ್ತು ಉ) ಯಾವುದೇ ಕನ್ನಡ ಶಾಲೆಯನ್ನು ಮತ್ತು ಅಲೆಮಾರಿಗಳ ಆಶ್ರಮ ಶಾಲೆ, ದಲಿತರ ವಸತಿ ಶಾಲೆಗಳನ್ನು ಸಹ ಮುಚ್ಚಲು ಸರ್ಕಾರ ಉದ್ದೇಶಿಸಿರುವುದಿಲ್ಲ.

ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

531 (690) ಶ್ರೀ ಹಾಲಪ್ಪ ಹೆಚ್. (ಸೊರಬ ಕ್ಷೇತ್ರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

ಅ) ರಾಜ್ಯದಲ್ಲಿರುವ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಸಿ ಮತ್ತು ಡಿ ದರ್ಜೆ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು);

ಶ್ರೀ ಎಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಸರ್ಕಾರಿ ಪ್ರೌಢ ಶಾಲೆಯಲ್ಲಿ ಖಾಲಿ ಇರುವ "ಸಿ" ಮತ್ತು "ಡಿ" ಹುದ್ದೆಗಳನ್ನು ಬಡ್ತಿ ಹಾಗೂ ಅನುಕಂಪದ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲಾಗುತ್ತಿದೆ. ನೇರ ನೇಮಕಾತಿ ಕೋಟಾದಡಿಯ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ಭರ್ತಿ ಮಾಡಿಕೊಳ್ಳ ಲಾಗುವುದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಖಾಲಿ ಇರುವ "ಸಿ" ಮತ್ತು "ಡಿ" ದರ್ಜೆಯ ಹುದ್ದೆಗಳನ್ನು ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿ ಸುತ್ತಿರುವ ಅರೆಕಾಲಿಕ ನೌಕರರ ಸೇವೆಯನ್ನು ಸಕ್ರಮಗೊಳಿಸುವ ಮೂಲಕ ಹಾಗೂ ಬಡ್ತಿ ಮತ್ತು ಅನುಕಂಪದ ಆಧಾರದ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲಾಗುತ್ತಿದೆ.

ಪುಸ್ತಕ ಖರೀದಿಗೆ ಬಿಡುಗಡೆಯಾದ ಹಣ

538 (691) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಕಳೆದ 3 ವರ್ಷಗಳಲ್ಲಿ ಪುಸ್ತಕಗಳ ಖರೀದಿಗಾಗಿ ಪ್ರತಿ ವರ್ಷ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ;

ಆ) ರಾಜ್ಯದಲ್ಲಿರುವ ಗ್ರಂಥಾಲಯಗಳ ಪೈಕಿ ಎಷ್ಟು ಗ್ರಂಥಾಲಯಗಳು ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿವೆ; ಬಾಡಿಗೆ ಕಟ್ಟಡದಲ್ಲಿ ಎಷ್ಟಿವೆ; (ವಿವರ ಒದಗಿಸುವುದು);

ಇ) ಪ್ರಸಕ್ತ ಸಾಲಿನಲ್ಲಿ ರಾಜ್ಯಾದ್ಯಂತ ಇರುವ ಎಲ್ಲಾ ಸಾರ್ವಜನಿಕ ಗ್ರಂಥಾಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸುವ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು?